Received on 5/11/2020
WUP

ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆಃ ಕಾಶಿಇ/ಶೈವಿ/06/ಸುತ್ತೋಲೆ/2020-21

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಶೇಷಾದ್ರಿ ರಸ್ತೆ, ಬೆಂಗಳೂರು-01
ದಿನಾಂಕಃ 05.11.2020

# ಸುತ್ತೋಲೆ

ವಿಷಯ : ಇಲಾಖಾ ವ್ಯಾಪ್ತಿಯ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಪ್ರಾಂಶುಪಾಲರುಗಳು ತೆಗೆದುಕೊಳ್ಳಬೇಕಾದ ಕ್ರಮದ ಕುರಿತು.

ಉಲ್ಲೇಖ : ಸರ್ಕಾರದ ಪತ್ರ ಸಂಖ್ಯೆ: ಇಡಿ 11 ಡಿಸಿಇ 2020, ದಿನಾಂಕ: 16.10.2020.

*****

ಕೋವಿಡ್ -19 ಸಾಂಕ್ರಾಮಿಕ ರೋಗವು ಸರ್ವವ್ಯಾಪ್ತಿಯಾಗಿ ವಿಶ್ವಸಮುದಾಯಕ್ಕೆ ಸವಾಲಾಗಿದ್ದು, ಮಾನವ ಜೀವ ಸಂಕಲುವನ್ನು ತಲ್ಲಣಗೊಳಸಿದೆ. ಈ ಸಾಂಕ್ರಾಮಿಕ ರೋಗದ ನಿಯಂತ್ರಣಕ್ಕೆ ಆರಂಭಿಕ ಹಂತದಿಂದಲೂ ಸರ್ಕಾರವು ಹಲವಾರು ಕ್ರಮಗಳನ್ನು ಕೈಗೊಂಡಿದ್ದು, ಇದರಿಂದಾಗಿ ಸಾರ್ವಜನಿಕರು ತಮ್ಮ ದೈನಂದಿನ ಚಟುವಟಿಕೆಗಳಲ್ಲಿ ಭಾಗಿಯಾಗುತ್ತಿದ್ದಾರೆ. ಸಾರ್ವಜನಿಕರ ಪಾಲ್ಗೊಳ್ಳುವಿಕೆ ಮತ್ತು ಮುಂಬರುವ ಹಬ್ಬದ ದಿನಗಳು ಹಾಗೂ ಚಳಿಗಾಲದ ಆರಂಭಿಕ ದಿನಗಳು ಕೋವಿಡ್-19 ನಿಯಂತ್ರಣಕ್ಕೆ ಸವಾಲಾಗಿದ್ದು, ಈ ರೋಗ ನಿಯಂತ್ರಣ ಪರಿಣಾಮಕಾರಿಯಾಗಿ ಅನುಷ್ಠಾನ ಮಾಡಲು ಹಾಗೂ ಈ ಅವಧಿಯಲ್ಲಿ ತೀವ್ರತೆರನಾದ ಮತ್ತು ಕೇಂದ್ರೀಕೃತ ಸಂವಹನ ಆಂದೋಲನವನ್ನು ಹಮ್ಮಿಕೊಳ್ಳಲು ಉಲ್ಲೇಖಿತ ಪತ್ರದಲ್ಲಿ ತಿಳಿಸಲಾಗಿದೆ.

ಈ ಹಿನ್ನಲೆಯಲ್ಲಿ ಸದರಿ ಕೋವಿಡ್-19 ಸಾಂಕ್ರಾಮಿಕ ರೋಗದ ನಿಯಂತ್ರಣಕ್ಕೆ ಇಲಾಖಾ ವ್ಯಾಪ್ತಿಯ ಎಲ್ಲಾ ಸರ್ಕಾರಿ ಮತ್ತು ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳು ಕೆಳಕಂಡಂತೆ ಕ್ರಮಗಳನ್ನು ಅನುಸರಿಸಿ ವಿದ್ಯಾರ್ಥಿಗಳು ಹಾಗೂ ಪೋಷಕರಲ್ಲಿ ಹಾಗೂ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಅಗತ್ಯ ಕ್ರಮ ವಹಿಸುವಂತೆ ಸೂಚಿಸಲಾಗಿದೆ.

1. ಬೋಧಕ ಸಿಬ್ಬಂದಿಯಿಂದ ಸಾಮಾಜಿಕ ಜಾಲತಾಣಗಳ ಮುಖೇನ ವಿದ್ಯಾರ್ಥಿ ಮತ್ತು ಪೋಷಕರಿಗೆ ಸಂದೇಶಗಳ ವಿನಿಮಯ.
2. ರಾಷ್ಟ್ರೀಯ ಸೇವಾ ಯೋಜನೆಯಡಿಯಲ್ಲಿನ ವಿದ್ಯಾರ್ಥಿಗಳ ಮುಖೇನ ವಾಕಾಥಾನ್/ಸೈಕಲ್ ಜಾಥಾ.

ಕಾಲೇಜು ಶಿಕ್ಷಣ ಹೆಚ್ಚುವರಿ ನಿರ್ದೇಶಕರು

**ಇವರಿಗೆ:**

1. ಇಲಾಖಾ ವ್ಯಾಪ್ತಿಯ ಎಲ್ಲಾ ಸರ್ಕಾರಿ ಮತ್ತು ಖಾಸಗಿ ಅನುದಾನಿತ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.

....2

**ಪ್ರತಿಯನ್ನು :**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಶಿಕ್ಷಣ ಇಲಾಖೆ ( ಉನ್ನತ ಶಿಕ್ಷಣ), ಬಹುಮಹಡಿಗಳ ಕಟ್ಟಡ, ಬೆಂಗಳೂರು-01- ಮಾಹಿತಿಗಾಗಿ.
2. ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರು, ಬೆಂಗಳೂರು, ಮೈಸೂರು, ಮಂಗಳೂರು, ಶಿವಮೊಗ್ಗ, ಧಾರವಾಡ, ಮತ್ತು ಕಲಬುರಗಿ ತಮ್ಮ ವ್ಯಾಪ್ತಿಯ ಕಾಲೇಜುಗಳಲ್ಲಿ ಅಗತ್ಯ ಕ್ರಮವಹಿಸಲು ಸೂಚಿಸಲಾಗಿದೆ.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ,ಬೆಂಗಳೂರು - ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ.
4. ಕಛೇರಿ ಪ್ರತಿ